ಶ್ರೀ ಜೆ. ಎಚ್. ಪಟೇಲ್(ಭಾರಿ ಮಂತ್ರಿ ಮತ್ತು ಮಧ್ಯಮ ಪ್ರಮಾಣದ ಉದ್ಯಮಗಳು ಮತ್ತು ವಿದ್ಯುತ್ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ನನ್ನ ಹೆಸರಿನ ಮುಂದಿರುವ ಈ ಕೆಳಕಂಡ ಕಾಗದ ಪತ್ರಗಳನ್ನು ಮಂಡಿಸುತ್ತೇನೆ.

೧೯೪೯ರ ಭಾರತೀಯ ವಿದ್ಯುಚ್ಛಕ್ತಿ (ಪೂರೈಕೆ) ಅಧಿ ನಿಯಮ ೮೯ನೇ ಪ್ರಕರಣದ (೫)ನೇ ಉಪ ಪ್ರಕರಣ ಮೇರೆಗೆ—

ಅ. ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯ ೧೯೮೫-೮೬ನೇ ಸಾಲಿನ ಲೆಕ್ಕಪತ್ರ ವರದಿ ಮತ್ತು ಆಯವ್ಯಯ ಪತ್ರ ಹಾಗೂ

ಆ. ೧೯೫೬ನೇ ಇಸವಿಯ ಕಂಪನಿ ಶಾಸನದ ೬೧೯(ಎ) ಕಲಮಿನ ಮೇರೆಗೆ ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ ೧೯೮೬-೮೭ನೇ ಸಾಲಿನ ವಾರ್ಷಿಕ ವರದಿಯನ್ನು ಹಾಗೂ

ಇ. ೧೯೮೫-೮೬ನೇ ಇಸವಿಯ ಕರ್ನಾಟಕ ರಾಜ್ಯ ಎಲೆಕ್ಟ್ರಾನಿಕ್ಸ್ ಡೆವಲಪ್‌ಮೆಂಟ್ ಕಾರ್ಪೊರೇಷನ್ ಲಿಮಿಟೆಡ್‌ನ ೯ನೇ ವಾರ್ಷಿಕ ವರದಿಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು.—ಕಾಗದ ಪತ್ರಗಳನ್ನು ಮಂಡಿಸಲಾಯಿತು.

ಅರ್ಜಿಗಳನ್ನೊಪ್ಪಿಸುವುದು.

ಶ್ರೀ ಪಿ. ಸಿ. ಮುನಿಸ್ವಾಮಯ್ಯ.—ಮಾನ್ಯ ಅಧ್ಯಕ್ಷರೇ, ಖಾಸಗಿ ಕನ್ನಡ ಶಾಲೆಗಳಲ್ಲಿ ಉಪಾಧ್ಯಾಯನಿ ಹಾಗೂ ಸಹಾಯಕಿ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿರುವವರಿಗೆ ಸರ್ಕಾರದಿಂದ ಶೇಕಡ ೧೦೦ರಷ್ಟು ವೇತನವನ್ನು ಚೆಕ್ ಮೂಲಕ ಪಾವತಿ ಮಾಡುವ ಬಗ್ಗೆ ಅರ್ಜಿಯನ್ನು ಮಾನ್ಯ ಸಭೆಗೆ ಒಪ್ಪಿಸುತ್ತೇನೆ.

ಶ್ರೀ ಬಸವರಾಜ್.—ಮಾನ್ಯ ಅಧ್ಯಕ್ಷರೇ, ಉಡುಪಿ ತಾಲ್ಲೂಕಿನ ಕೋಡಿ ಬೆಂಗ್ರೆ ಗ್ರಾಮದ ಮಿನುಗಾರಿಕೆ, ಬೋಟು ತಂಗುದಾಣ ಮತ್ತು ಕೊರೆತ ತಡೆಗಟ್ಟುವ ಕೆಲಸ ಹಿಂದೆ ಬಿದ್ದಿರುವ ಬಗ್ಗೆ ಅರ್ಜಿಯನ್ನು ಮಾನ್ಯ ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು.—ಸಭೆಗೆ ಅರ್ಜಿಗಳನ್ನು ಒಪ್ಪಿಸಲಾಯಿತು.

ವರದಿಗಳನ್ನೊಪ್ಪಿಸುವುದು.

ಅಧ್ಯಕ್ಷರು.—ಶ್ರೀ ಬಿ ಆರ್. ಯಾವಗಲ್ ಅವರ ಪರವಾಗಿ ಈ ಅರ್ಜಿ ಸಮಿತಿಯ ಸದಸ್ಯರು ಯಾರಾದರು ಸಭೆಗೆ ವರದಿಯನ್ನು ಒಪ್ಪಿಸಿ.

ಶ್ರೀ ಎ. ಎಂ. ಹಿಂಡಸ್‌ಗೇರಿ.—ಮಾನ್ಯ ಅಧ್ಯಕ್ಷರೇ, ಅರ್ಜಿಗಳ ಸಮಿತಿ ಪರವಾಗಿ ಈ ಕೆಳಕಂಡ ವರದಿಗಳನ್ನು ಸಭೆಗೆ ಒಪ್ಪಿಸುತ್ತೇನೆ.—

ಅ. ಆಹಾರ ಮತ್ತು ಸಾರಿಗೆ ಇಲಾಖೆ, ಸಮಾಜ ಕಲ್ಯಾಣ ಮತ್ತು ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಗೃಹ ಇಲಾಖೆಗಳಿಗೆ ಸಂಬಂಧಿಸಿದಂತೆ ಅರ್ಜಿಗಳ ಸಮಿತಿಯ ಆರನೇ ವರದಿಯನ್ನು,

ಆ. ಅರ್ಜಿಗಳ ಸಮಿತಿಯ ನಾಲ್ಕನೇ ವರದಿಯಲ್ಲಿ ಮಾಡಲಾಗಿದ್ದ ಶಿಫಾರಸ್‌ಗಳ ಮೇಲೆ ಸರ್ಕಾರದವರು ತೆಗೆದುಕೊಂಡ ಕ್ರಮಗಳ ಬಗ್ಗೆ ಏಳನೆಯ ವರದಿಯನ್ನು ಹಾಗೂ

ಇ. ವಸತಿ ಮತ್ತು ನಗರಾಭಿವೃದ್ಧಿ ಇಲಾಖೆ ಸಮಾಜ ಕಲ್ಯಾಣ ಮತ್ತು ಕಾರ್ಮಿಕ ಇಲಾಖೆ ಹಾಗೂ ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನಸೇವಾ ಇಲಾಖೆಗಳಿಗೆ ಸಂಬಂಧಪಟ್ಟ ಎಂಟನೆಯ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು.—ವರದಿಗಳನ್ನು ಸಭೆಗೆ ಒಪ್ಪಿಸಲಾಯಿತು.